ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಬುಧವಾರ, ದಿನಾಂಕ : 30 ನೇ ಸೆಪ್ಟೆಂಬರ್, 2020

ಮಹಾದೇವಪುರದ ನಿವೇಶನಗಳನ್ನು / ಮನೆಗಳನ್ನು ಅವ್ಯವಹಾರವಾಗಿ ಮಾರಾಟ ಮಾಡುತ್ತಿರುವ ಬಗ್ಗೆ

ಶ್ರೀ ಎಂ. ನಾರಾಯಣಸ್ವಾಮಿ(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) -

1073 (602) ಮಾನ್ಯ ಕಂದಾಯ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ಬೆಂಗಳೂರು ಪೂರ್ವ ತಾಲ್ಲೂಕು ಕೆ.ಆರ್. ಪುರಂ ವಿಧಾನ ಸಭಾ ಕ್ಷೇತ್ರದ ಮಹಾದೇವಪುರ ಸರ್ವೆ ನಂ. 187ರ ಸರ್ಕಾರಿ ಜಮೀನಿನಲ್ಲಿ ಸ್ಥಳೀಯ ನಗರ ಪಾಲಿಕೆ ಸದಸ್ಯರು ಮತ್ತು ಇನ್ನಿತರರು ಸೇರಿಕೊಂಡು ನಿವೇಶನಗಳನ್ನು ಮತ್ತು ಮನೆಗಳನ್ನು ಬೇಕಾದವರಿಗೆ ಮಾರಾಟ ಮಾಡುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

(ಆ) ಹಲವು ಬಾರಿ ದೂರು ನೀಡಿದ್ದರೂ ಈ ಬಗ್ಗೆ ಕ್ರಮ ಕೈಗೊಳ್ಳದಿರಲು ಕಾರಣವೇನು; (ವಿವರ ನೀಡುವುದು)

(ಇ) ಇದರಲ್ಲಿ ಇಲಾಖೆಯ ಅಧಿಕಾರಿಗಳು ಶಾಮೀಲಾಗಿರುವುದು ಮೇಲ್ನೋಟಕ್ಕೆ ಕಂಡು ಬರುತ್ತಿದ್ದು ಈ ಬಗ್ಗೆ ಸೂಕ್ತ ತನಿಖೆ ಮಾಡಲಾಗಿದೆಯೇ;

(ಈ) ಸರ್ಕಾರಿ ಜಾಗಗಳನ್ನು ಮಾರಾಟ ಮಾಡುತ್ತಿದ್ದರೂ ಈ ಬಗ್ಗೆ ಸರ್ಕಾರ ಕ್ರಮ ಕೈಗೊಳ್ಳದೆ ಇರಲು ಕಾರಣವೇನು?